**Akashvani : Bangalore**
**National Bulletin In Kannada**
**05.03.2025 / 7.35 am**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**05.03.2025 / 7.35 am**

**<><*<><>*><>**

<u>ಮುಖ್ಯಾಂಶಗಳು</u>

**೧. ಬಜೆಟ್ ನಂತರದ ಉದ್ಯೋಗ ಕುರಿತ ವೆಬಿನಾರ್‌ನಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಭಾಗಿ**

**೨. ನವದೆಹಲಿಯಲ್ಲಿ ಇಂದು ರಾಷ್ಟ್ರೀಯ ಸಮಾವೇಶ; ಪಂಚಾಯತಿ ರಾಜ್ ಸಚಿವಾಲಯದಿಂದ 'ಮಹಿಳಾ ಸ್ನೇಹಿ ಗ್ರಾಮ ಪಂಚಾಯತ್' ಗೆ ಚಾಲನೆ**

**೩. ಲಂಡನ್‌ನಲ್ಲಿ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಭೇಟಿ; ಉಭಯ ದೇಶಗಳ ಸಂಬಂಧ ವೃದ್ಧಿಸುವ ಬಗ್ಗೆ ಚರ್ಚೆ**

**೪. ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್; ಸೆಮಿಫೈನಲ್‌ನಲ್ಲಿ ಭಾರತಕ್ಕೆ ಆಸ್ಟ್ರೇಲಿಯಾ ವಿರುದ್ಧ ೪ ವಿಕೆಟ್‌ಗಳ ಭರ್ಜರಿ ಜಯ; ಫೈನಲ್‌ಗೆ ಪ್ರವೇ**

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಇಂದು ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಬಜೆಟ್ ನಂತರದ ಉದ್ಯೋಗ ಕುರಿತ ವೆಬಿನಾರ್‌ನಲ್ಲಿ ಭಾಗವಹಿಸಲಿದ್ದಾರೆ. ಹೂಡಿಕೆ, ಆರ್ಥಿಕತೆ ಮತ್ತು ನಾವೀನ್ಯತೆಯ ಕುರಿತು ಪ್ರಧಾನಿ, ಈ ವೆಬಿನಾರ್‌ನಲ್ಲಿ ಮಾತನಾಡಲಿದ್ದಾರೆ. ಉದ್ಯೋಗ ಸೃಷ್ಟಿ ಸರ್ಕಾರದ ಪ್ರಮುಖ ಗಮನ ಕ್ಷೇತ್ರಗಳಲ್ಲಿ ಒಂದಾಗಿದೆ. ಪ್ರಧಾನ ಮಂತ್ರಿಯವರ ದೂರದೃಷ್ಟಿಯಿಂದ ಪ್ರೇರಿತವಾಗಿ, ಸರ್ಕಾರವು ಉದ್ಯೋಗ ಬೆಳವಣಿಗೆಯನ್ನು ಉತ್ತೇಜಿಸಲು ಮತ್ತು ಉದ್ಯೋಗಕ್ಕೆ ಹೆಚ್ಚಿನ ಮಾರ್ಗಗಳನ್ನು ಸೃಷ್ಟಿಸಲು ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ. ವೆಬಿನಾರ್ ಸರ್ಕಾರ, ಕೈಗಾರಿಕೆ, ಶೈಕ್ಷಣಿಕ ಮತ್ತು ನಾಗರಿಕರ ನಡುವೆ ಸಹಯೋಗವನ್ನು ಬೆಳೆಸುತ್ತದೆ, ಪರಿವರ್ತನಾತ್ಮಕ ಬಜೆಟ್ ಘೋಷಣೆಗಳನ್ನು ಪರಿಣಾಮಕಾರಿ ಅನುಷ್ಠಾನಗೊಳಿಸುವಲ್ಲಿ ಈ ಚರ್ಚೆಗಳನ್ನು ಸಹಕಾರಿಯಾಗಲಿವೆ. ಈ ಚರ್ಚೆಗಳು ಸುಸ್ಥಿರ ಮತ್ತು ಸಮಗ್ರ ಬೆಳವಣಿಗೆಗೆ ದಾರಿ ಮಾಡಿಕೊಡುವುದು, ತಂತ್ರಜ್ಞಾನ ಮತ್ತು ಇತರ ವಲಯಗಳಲ್ಲಿ ನಾಯಕತ್ವ ಮತ್ತು ೨೦೪೭ ರ ವೇಳೆಗೆ ವಿಕಸಿತ ಭಾರತದ ಗುರಿಯನ್ನು ಸಾಧಿಸುವತ್ತ ಕೆಲಸ

ಮಾಡುವ ಕೌಶಲ್ಯಪೂರ್ಣ, ಆರೋಗ್ಯಕರ ಕಾರ್ಯಪಡೆಗೆ ದಾರಿ ಮಾಡಿಕೊಡುವ ಗುರಿಯನ್ನು ಹೊಂದಿವೆ.

<><*<><>*><>

ಗುಜರಾತ್‌ನ ಜಾಮ್‌ನಗರದಲ್ಲಿ ವನತಾರ ಎಂಬ ವಿಶಿಷ್ಟ ವನ್ಯಜೀವಿ ಸಂರಕ್ಷಣೆ ಮತ್ತು ಪುನರ್ವಸತಿ ಉಪಕ್ರಮವನ್ನು ನಿನ್ನೆ ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪ್ರಧಾನಿ ಈ ಉಪಕ್ರಮ ಪರಿಸರ ಸುಸ್ಥಿರತೆ ಮತ್ತು ವನ್ಯಜೀವಿ ಕಲ್ಯಾಣವನ್ನು ಉತ್ತೇಜಿಸುವುದರ ಜೊತೆಗೆ ಪ್ರಾಣಿಗಳಿಗೆ ಸುರಕ್ಷಿತ ತಾಣವನ್ನು ಒದಗಿಸುತ್ತದೆ ಎಂದು ಹೇಳಿದರು. ವನತಾರದಂತಹ ಪ್ರಯತ್ನವು ನಿಜವಾಗಿಯೂ ಶ್ಲಾಘನೀಯವಾಗಿದ್ದು, ಗ್ರಹವನ್ನು ಹಂಚಿಕೊಳ್ಳುವ ಜನರನ್ನು ರಕ್ಷಿಸುವ ಭಾರತದ ಶತಮಾನಗಳಷ್ಟು ಹಳೆಯ ನೀತಿಗೆ ಎದ್ದುಕಾಣುವ ಉದಾಹರಣೆಯಾಗಿದೆ ಎಂದು ಅವರು ಹೇಳಿದರು. ವನತಾರಗೆ ಭೇಟಿ ನೀಡಿದ ಸಮಯದಲ್ಲಿ, ಆಸಿಡ್ ದಾಳಿಗೆ ಒಳಗಾದ ಆನೆ ನೋಡಿದ್ದನ್ನು ಪ್ರಧಾನಿ ಹಂಚಿಕೊಂಡಿದ್ದಾರೆ. ವನ್ಯ ಪ್ರಾಣಿಗಳ ಬಗೆಗಿನ ಸಹಾನುಭೂತಿಯ ಪ್ರಯತ್ನಕ್ಕಾಗಿ ಕೈಗಾರಿಕೋದ್ಯಮಿ ಅನಂತ್ ಅಂಬಾನಿ ಮತ್ತು ಅವರ ಇಡೀ ತಂಡವನ್ನು ಪ್ರಧಾನಿ ಶ್ಲಾಘಿಸಿದರು.

**<><*<><>*><>**

ಪಂಚಾಯತಿ ರಾಜ್ ಸಚಿವಾಲಯವು ಇಂದು ನವದೆಹಲಿಯಲ್ಲಿ ನಡೆಯುವ ರಾಷ್ಟ್ರೀಯ ಸಮಾವೇಶದಲ್ಲಿ ತನ್ನ ಮಾದರಿ ಮಹಿಳಾ ಸ್ನೇಹಿ ಗ್ರಾಮ ಪಂಚಾಯತ್‌ಗಳನ್ನು ಉದ್ಘಾಟಿಸಲಿದೆ. ಈ ಉಪಕ್ರಮವು ಸಚಿವಾಲಯದ ೨೦೨೫ ರ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯ ಒಂದು ಭಾಗವಾಗಿದೆ. ಪ್ರತಿ ಜಿಲ್ಲೆಯಲ್ಲಿ ಕನಿಷ್ಠ ಒಂದು ಮಾದರಿ ಮಹಿಳಾ ಸ್ನೇಹಿ ಗ್ರಾಮ ಪಂಚಾಯತ್ ಅನ್ನು ಸ್ಥಾಪಿಸುವುದು ಈ ಉಪಕ್ರಮದ ಮುಖ್ಯ ಉದ್ದೇಶವಾಗಿದೆ. ಇದು ಮಹಿಳಾ ಸ್ನೇಹಿ ಆಡಳಿತ ಪದ್ಧತಿಗಳಿಗೆ ದಾರಿದೀಪವಾಗಿ ಕಾರ್ಯನಿರ್ವಹಿಸುತ್ತದೆ. ಪಂಚಾಯತಿ ರಾಜ್ ರಾಜ್ಯ ಸಚಿವ ಪ್ರೊಫೆಸರ್ ಎಸ್.ಪಿ.ಸಿಂಗ್ ಬಘೇಲ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ರಾಜ್ಯ ಸಚಿವ ಅನುಪ್ರಿಯಾ ಪಟೇಲ್ ಮತ್ತು ವಿವಿಧ ಸಚಿವಾಲಯಗಳು, ಇಲಾಖೆಗಳು ಮತ್ತು ವಿಶ್ವಸಂಸ್ಥೆಯ ಜನಸಂಖ್ಯಾ ನಿಧಿಯಂತಹ ಅಂತರರಾಷ್ಟ್ರೀಯ ಸಂಸ್ಥೆಗಳ ಇತರ ಪ್ರತಿನಿಧಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

**<><*<><>*><>**

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರು ಲಂಡನ್‌ನ ೧೦ ಡೌನಿಂಗ್ ಸ್ಟ್ರೀಟ್‌ನಲ್ಲಿ ಯುನೈಟೆಡ್ ಕಿಂಗ್‌ಡಮ್ ಪ್ರಧಾನಿ ಕೀರ್ ಸ್ಟಾರ್ಮರ್ ಅವರನ್ನು ಭೇಟಿ ಮಾಡಿದರು. ಈ ವೇಳೆ ಅವರು, ದ್ವಿಪಕ್ಷೀಯ ಆರ್ಥಿಕ ಸಹಕಾರವನ್ನು ಮುಂದುವರಿಸುವುದು ಮತ್ತು ಉಭಯ

ದೇಶಗಳ ಸಂಬಂಧ ವೃದ್ಧಿಸುವ ಬಗ್ಗೆ ಚರ್ಚಿಸಿದರು. ಸಭೆಯ ನಂತರ ಡಾ.ಎಸ್.ಜೈಶಂಕರ್, ಸಾಮಾಜಿಕ ಮಾಧ್ಯಮದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ಸ್ಟಾರ್ಮರ್ ಅವರಿಗೆ ಆತ್ಮೀಯ ಶುಭಾಶಯ ತಿಳಿಸಿರುವುದಾಗಿ ಹಂಚಿಕೊಂಡಿದ್ದಾರೆ. ಉಕ್ರೇನ್ ಸಂಘರ್ಷದ ಬಗ್ಗೆ ಸ್ಟಾರ್ಮರ್, ಯುಕೆ ದೃಷ್ಟಿಕೋನವನ್ನು ಹಂಚಿಕೊಂಡಿರುವ ಬಗ್ಗೆಯೂ ಉಲ್ಲೇಖಿಸಿದ್ದಾರೆ. ನಂತರ, ಸಚಿವರು, ತಮ್ಮ ಯುಕೆ ಸಹವರ್ತಿ ವಿದೇಶಾಂಗ ಕಾರ್ಯದರ್ಶಿ ಡೇವಿಡ್ ಲ್ಯಾಮಿ ಅವರನ್ನು ಭೇಟಿ ಮಾಡಿ, ಹೆಚ್ಚಿನ ಚರ್ಚೆಗಳಿಗೆ ತಮ್ಮ ಉತ್ಸಾಹವನ್ನು ವ್ಯಕ್ತಪಡಿಸಿದರು.

**<><*<><>*><>**

ಕೇಂದ್ರ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಇದೇ ತಿಂಗಳ ೭ ರಂದು ರಷ್ಯಾಕ್ಕೆ ಭೇಟಿ ನೀಡಲಿದ್ದಾರೆ. ಭಾರತ ಮತ್ತು ರಷ್ಯಾಕ್ಕೆ ಸಂಬಂಧ ಪಟ್ಟಂತೆ ಪ್ರಮುಖ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ಇದೊಂದು ಉತ್ತಮ ಅವಕಾಶವಾಗಲಿದೆ ಎಂದು ಅವರು ಅಭಿಪ್ರಾಯ ಪಟ್ಟಿದ್ದಾರೆ.

ಮಿಶ್ರಿ ತಮ್ಮ ಭೇಟಿಯ ಸಮಯದಲ್ಲಿ ರಷ್ಯಾದ ಉನ್ನತ ಮಟ್ಟದ ಅಧಿಕಾರಿಗಳನ್ನು ಭೇಟಿ ಮಾಡುವ ನಿರೀಕ್ಷೆಯಿದೆ ಎಂದು ಅವರು ತಿಳಿಸಿದ್ದಾರೆ. ವ್ಯಾಪಾರ ಮತ್ತು ಹೂಡಿಕೆಯನ್ನು ವಿಸ್ತರಿಸುವುದು, ವಿಶೇಷವಾಗಿ ದ್ವಿಮುಖ ವ್ಯಾಪಾರವನ್ನು ಹೆಚ್ಚು ಸಮತೋಲನಗೊಳಿಸಲು, ಭಾರತೀಯ ರಫ್ತುಗಳನ್ನು ಹೆಚ್ಚಿಸುವುದು ಮತ್ತು ಪಾಶ್ಚಿಮಾತ್ಯ ನಿರ್ಬಂಧಗಳ ಹಿನ್ನೆಲೆಯಲ್ಲಿ ಭಾರತಕ್ಕೆ ರಷ್ಯಾದ ಇಂಧನ ಪೂರೈಕೆಯನ್ನು ನಿರ್ವಹಿಸುವುದು ಸೇರಿದಂತೆ ಇನ್ನು ಅನೇಕ ವಿಷಯಗಳು ರಷ್ಯಾದಲ್ಲಿ ನಡೆಯಲಿರುವ ವಿದೇಶಾಂಗ ಕಾರ್ಯದರ್ಶಿಗಳ ಸಭೆಯಲ್ಲಿ ಪರಿಗಣಿಸಲಾಗುವ ವಿಷಯಗಳಲ್ಲಿ ಸೇರಿವೆ ಎಂದು ಅವರು ಹೇಳಿದ್ದಾರೆ.

**<><*<><>*><>**

ಸುಸ್ಥಿರ ಮತ್ತು ಎಲ್ಲರನ್ನೂ ಒಳಗೊಳ್ಳುವ ಅಭಿವೃದ್ಧಿಗಾಗಿ ಸಂಪನ್ಮೂಲಗಳನ್ನು ಸಮರ್ಥವಾಗಿ ಹಾಗೂ ನ್ಯಾಯಯುತವಾಗಿ ನಿರ್ವಹಿಸಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ರಾಷ್ಟ್ರಪತಿ ಭವನದಲ್ಲಿ ನಿನ್ನೆ ಭಾರತೀಯ ಕಂದಾಯ ಸೇವೆಯ ಪ್ರಶಿಕ್ಷಣಾರ್ಥಿ ಅಧಿಕಾರಿಗಳನ್ನುದ್ದೇಶಿಸಿ ಮಾತನಾಡಿದ ಅವರು, ದೇಶದ ಮೂಲಸೌಕರ್ಯ ಬೆಳೆಯುತ್ತಿದ್ದು, ಡಿಜಿಟಲ್ ಸಂಪರ್ಕವು ಅಂತರವನ್ನು ಕಡಿಮೆ ಮಾಡುತ್ತಿದೆ ಮತ್ತು ಆರ್ಥಿಕ ಅವಕಾಶಗಳು ಹಿಂದೆಂದಿಗಿಂತಲೂ ಹೆಚ್ಚು ಸುಲಭವಾಗಿ ಲಭ್ಯವಾಗುತ್ತಿವೆ ಎಂದು ತಿಳಿಸಿದರು. ಆಡಳಿತ ಮತ್ತು ದೇಶದ ಅಭಿವೃದ್ಧಿಯಲ್ಲಿ ಭಾರತೀಯ ಕಂದಾಯ ಸೇವಾ ಅಧಿಕಾರಿಗಳ ಪಾತ್ರ ಪ್ರಮುಖವಾಗಿದ್ದು, ಅಗತ್ಯ ಸಂಪನ್ಮೂಲವನ್ನು ನ್ಯಾಯಯುತ, ಪರಿಣಾಮಕಾರಿ ಮತ್ತು ಪಾರದರ್ಶಕ ರೀತಿಯಲ್ಲಿ ಕ್ರೋಢೀಕರಿಸುವುದನ್ನು ಖಚಿತಪಡಿಸಿಕೊಳ್ಳುವಲ್ಲಿ ಇವರು ಪ್ರಮುಖ ಪಾತ್ರ ವಹಿಸುತ್ತಾರೆ ಎಂದು ರಾಷ್ಟ್ರಪತಿ ಹೇಳಿದರು. ಬದಲಾಗುತ್ತಿರುವ ಕಾಲ, ಬೆಳೆಯುತ್ತಿರುವ ನಿರೀಕ್ಷೆಗಳು ಮತ್ತು ಸರ್ಕಾರಿ

ಉಪಕ್ರಮಗಳು, ಹೆಚ್ಚಿನ ದಕ್ಷತೆ, ಪಾರದರ್ಶಕತೆ ಮತ್ತು ಅನುಕೂಲತೆಯ ಹೊಸ ಯುಗಕ್ಕೆ ನಾಂದಿ ಹಾಡಿವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

**<><*<><>*><>**

೨೦೫೦ರ ವೇಳೆಗೆ ವೃತ್ತಾಕಾರದ ಆರ್ಥಿಕತೆ ಎರಡು ಟ್ರಿಲಿಯನ್ ಡಾಲರ್‌ಗಿಂತಲೂ ಹೆಚ್ಚು ಮಾರುಕಟ್ಟೆ ಮೌಲ್ಯವನ್ನು ಹಾಗೂ ೧೦ ದಶಲಕ್ಷ ಉದ್ಯೋಗಳನ್ನು ಸೃಷ್ಟಿಸುವ ಸಾಮರ್ಥ್ಯ ಹೊಂದಿದೆ ಎಂದು ಕೇಂದ್ರ ಪರಿಸರ ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದ್ರ ಯಾದವ್ ತಿಳಿಸಿದ್ದಾರೆ. ರಾಜಸ್ಥಾನದ ಜೈಪುರದಲ್ಲಿ ನಡೆಯುತ್ತಿರುವ ಮೂರು ದಿನಗಳ ಏಷ್ಯಾ-ಪೆಸಿಫಿಕ್‌ನಲ್ಲಿನ ೧೨ನೇ ಪ್ರಾದೇಶಿಕ ೩-ಆರ್ ಮತ್ತು ವೃತ್ತಾಕಾರದ ಆರ್ಥಿಕ ವೇದಿಕೆಯನ್ನುದ್ದೇಶಿಸಿ ಮಾತನಾಡಿದ ಅವರು, ಭಾರತದ ವೃತ್ತಾಕಾರದ ಆರ್ಥಿಕತೆಯ ಧ್ಯೇಯಕ್ಕೆ ತ್ಯಾಜ್ಯ ಹಾಗೂ ಮಾಲಿನ್ಯ ತೊಡೆದು ಹಾಕುವುದು, ಉತ್ಪನ್ನ ಹಾಗೂ ವಸ್ತುಗಳ ಪ್ರಸಾರ ಮತ್ತು ಪ್ರಕೃತಿಯ ಮರುಸ್ಥಾಪನೆ ಮೂರು ಆಧಾರಸ್ತಂಭಗಳಾಗಿವೆ. ಸರ್ಕಾರ ಸಕ್ರಿಯವಾಗಿ ನೀತಿಗಳನ್ನು ರೂಪಿಸುತ್ತಿದ್ದು, ಈ ಧ್ಯೇಯದೊಂದಿಗೆ ಮುನ್ನೆಡಯುತ್ತಿದೆ ಎಂದು ಹೇಳಿದರು. "ಏಷ್ಯಾ-ಪೆಸಿಫಿಕ್ ಪ್ರದೇಶದಲ್ಲಿ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸುವ ಹಾಗೂ ಇಂಗಾಲ ಹೊರಸೂಸುವಿಕೆ ಪ್ರಮಾಣವನ್ನು ಕಡಿಮೆಗೊಳಿಸುವ ನಿಟ್ಟಿನಲ್ಲಿ ಸಮಾಜಗಳನ್ನು ಜಾಗೃತಗೊಳಿಸುವುದು" ಈ ಕಾರ್ಯಕ್ರಮದ ಧ್ಯೇಯ ವಾಕ್ಯವಾಗಿದೆ.

**<><*<><>*><>**

ವಿದ್ಯಾರ್ಥಿಗಳು ಯಾವಾಗಲೂ 'ರಾಷ್ಟ್ರ ಮೊದಲು' ಎಂಬ ಮನಸ್ಥಿತಿಯೊಂದಿಗೆ ನಿಗದಿತ ಗುರಿ ಸಾಧನೆಗೆ ಬದ್ಧರಾಗಿರಬೇಕು ಎಂದು ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಕರೆ ನೀಡಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ಭಾರತೀಯ ಸಮೂಹ ಸಂವಾಹನ ಸಂಸ್ಥೆ-ಐಐಎಂಸಿಯ ೫೮ ನೇ ಘಟಿಕೋತ್ಸವ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಸಚಿವರು, ಇಂದು ಇಡೀ ಮಾಧ್ಯಮ ಜಗತ್ತು ಬದಲಾಗುತ್ತಿದೆ. ಐಐಎಂಸಿಯನ್ನು ಅತ್ಯಾಧುನಿಕ ಸೌಲಭ್ಯಗಳೊಂದಿಗೆ ವಿಶ್ವ ದರ್ಜೆಯ ಮಾಧ್ಯಮ ಸಂಸ್ಥೆಯನ್ನಾಗಿ ಮಾಡಲಾಗುವುದು ಎಂದರು. ಇದೇ ವೇಳೆ ಸಚಿವರು, ೨೦೨೩-೨೪ ಬ್ಯಾಚ್‌ನ ೪೭೮ ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಸ್ನಾತಕೋತ್ತರ ಡಿಪ್ಲೊಮಾವನ್ನು ಪ್ರದಾನ ಮಾಡಿದರು.

**<><*<><>*><>**

ಭಾರತ, ಜಾಗತಿಕ ಹಸಿವು ನೀಗಿಸುವ ಸಾಮರ್ಥ್ಯ ಹೊಂದಿದ್ದು, ಈ ಕುರಿತಂತೆ ದೇಶದಲ್ಲಿ ಪರಿಸರ ವ್ಯವಸ್ಥೆ ಸ್ಥಾಪಿಸಲು ಸರ್ಕಾರ ಕಾರ್ಯೋನ್ಮುಖವಾಗಿದೆ ಎಂದು ಕೇಂದ್ರ ಆಹಾರ ಸಂಸ್ಕರಣಾ ಕೈಗಾರಿಕೆಗಳ ಸಚಿವ ಚಿರಾಗ್ ಪಾಸ್ವಾನ್ ಹೇಳಿದ್ದಾರೆ.

**<><*<><>*><>**

ದುಬೈನಲ್ಲಿ ನಡೆಯುತ್ತಿರುವ ಐಸಿಸಿ ಚಾಂಪಿಯನ್ಸ್ ಕ್ರಿಕೆಟ್ ಟ್ರೋಫಿಯಲ್ಲಿ ಕಳೆದ ರಾತ್ರಿ ನಡೆದ ಮೊದಲ ಸೆಮಿ ಫೈನಲ್ ಪಂದ್ಯದಲ್ಲಿ ಭಾರತ, ಆಸ್ಟ್ರೇಲಿಯಾ ವಿರುದ್ಧ ೪ ವಿಕೆಟ್ ಗಳ ಭರ್ಜರಿ ಜಯ ಸಾಧಿಸಿದೆ. ಇದರೊಂದಿಗೆ ೨೦೨೫ರ ಐಸಿಸಿ ಚಾಂಪಿಯನ್ಸ್ ಟ್ರೋಫಿಯ ಫೈನಲ್ ಪ್ರವೇಶಿಸಿದೆ. ಆಸ್ಟ್ರೇಲಿಯಾ ಒಡ್ಡಿದ ೨೬೫ ರನ್‌ಗಳ ಗುರಿಯನ್ನು ಬೆನ್ನಟ್ಟಿದ ಭಾರತ ತಂಡ ಪಂದ್ಯಾವಳಿಯ ಮೊದಲ ಸೆಮಿಫೈನಲ್‌ನಲ್ಲಿ ೪೮.೧ ಓವರ್‌ಗಳಲ್ಲಿ ಆರು ವಿಕೆಟ್‌ಗಳ ನಷ್ಟಕ್ಕೆ ೨೬೭ ರನ್ ಗಳಿಸಿ ಯಶಸ್ವಿಯಾಗಿ ಗುರಿ ತಲುಪಿತು.  ವಿರಾಟ್ ಕೊಹ್ಲಿ ೯೮ ಎಸೆತಗಳಲ್ಲಿ ೮೪ ರನ್ ಗಳಿಸುವ ಮೂಲಕ ಭಾರತದ ಪರ ಗರಿಷ್ಠ ರನ್‌ಗಳಿಸಿದರು. ಶ್ರೇಯಸ್ ಅಯ್ಯರ್ ೬೨ ಎಸೆತಗಳಲ್ಲಿ ೪೫ ರನ್ ಗಳಿಸಿದರೆ, ಕೆ.ಎಲ್ ರಾಹುಲ್ ೩೪ ಎಸೆತಗಳಲ್ಲಿ ೪೨ ಮತ್ತು ಹಾರ್ದಿಕ್ ಪಾಂಡ್ಯ ೨೪ ಎಸೆತಗಳಲ್ಲಿ ೨೮ ರನ್ ಗಳಿಸಿದರು.  ಭಾರತ, ಇಂದು ನಡೆಯಲಿರುವ ನ್ಯೂಜಿಲ್ಯಾಂಡ್ ಹಾಗೂ ದಕ್ಷಿಣ ಆಫ್ರಿಕಾ ನಡುವಿನ ಎರಡನೇ ಸೆಮಿಫೈನಲ್ ಪಂದ್ಯದಲ್ಲಿ ಗೆಲುವು ಸಾಧಿಸುವ ತಂಡದೊಂದಿಗೆ ಇದೇ ೯ ರಂದು ನಡೆಯಲಿರುವ ಫೈನಲ್ ಪಂದ್ಯದಲ್ಲಿ ಪ್ರಶಸ್ತಿಗಾಗಿ ಸೆಣಸಾಟ ನಡೆಸಲಿದೆ.

**<><*<><>*><>**

ಗೋವಾದ ಜವಾಹರಲಾಲ್ ನೆಹರು ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಇಂಡಿಯನ್ ಸೂಪರ್ ಲೀಗ್ -ಐಎಸ್ಎಲ್ ಫುಟ್ಬಾಲ್ ಪಂದ್ಯದಲ್ಲಿ ಗೋವಾ ತಂಡವು ಮೊಹಮ್ಮದನ್ ಎಸ್‌ಸಿ ವಿರುದ್ಧ ೨-೦ ಅಂತರದ ಗೆಲುವು ದಾಖಲಿಸಿತು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**